ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು

# ಕರ್ನಾಟಕ ರಾಜ್ಯಪಾಲರ
# ರಾಜ್ಯ ವಿಧಾನ ಮಂಡಲದ
# ಭಾಷಣ

೦೩-೦೭-೨೦೨೩

ಸೋಮವಾರ

**ವಿಧಾನ ಪರಿಷತ್ತಿನ ಸನ್ಮಾನ್ಯ ಸಭಾಪತಿಗಳೆ,**
**ವಿಧಾನ ಸಭೆಯ ಸನ್ಮಾನ್ಯ ಸಭಾಧ್ಯಕ್ಷರೆ,**
**ಕರ್ನಾಟಕ ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಗಳೆ,**
**ಕರ್ನಾಟಕ ರಾಜ್ಯದ ಸನ್ಮಾನ್ಯ ಉಪ ಮುಖ್ಯಮಂತ್ರಿಗಳೆ,**
**ಸನ್ಮಾನ್ಯ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರೆ,**
**ಸನ್ಮಾನ್ಯ ವಿಧಾನಸಭೆಯ ವಿರೋಧ ಪಕ್ಷದ ನಾಯಕರೆ,**
**ಕರ್ನಾಟಕ ರಾಜ್ಯದ ಸನ್ಮಾನ್ಯ ಮಂತ್ರಿಗಳೆ ಮತ್ತು**
**ವಿಧಾನ ಸಭೆಯ ಸನ್ಮಾನ್ಯ ಸದಸ್ಯರೆ,**

1. ಹೊಸ ಭರವಸೆ, ಹೊಸ ಕನಸುಗಳನ್ನು ಹೊತ್ತು ವಿಧಾನಸಭೆಗೆ ಆಗಮಿಸಿರುವ ತಮ್ಮೆಲ್ಲರಿಗೂ ಕರ್ನಾಟಕ ವಿಧಾನ ಮಂಡಲದ ಈ ಜಂಟಿ ಅಧಿವೇಶನಕ್ಕೆ ಹೃತ್ಪೂರ್ವಕ ಸ್ವಾಗತ ಕೋರುತ್ತೇನೆ.

2. ಹೊಸ ಸರ್ಕಾರವೊಂದನ್ನು ಆರಿಸುವಾಗ ಜನರ ನಿರೀಕ್ಷೆಗಳೂ ಹೊಸತಾಗಿರುತ್ತವೆ. ಹಳೆಯದಕ್ಕಿಂತ ಭಿನ್ನವಾದ ಮತ್ತು ತಮ್ಮ ಆಶೋತ್ತರಗಳನ್ನು ಪ್ರತಿಬಿಂಬಿಸುವ ಆಡಳಿತವೊಂದನ್ನೇ ಅವರು ನಿರೀಕ್ಷಿಸುತ್ತಿರುತ್ತಾರೆ. ಕಳೆದ 34 ವರ್ಷಗಳಲ್ಲಿ ಯಾರಿಗೂ ನೀಡದ ಬಹುಮತದೊಂದಿಗೆ ಈ ಸರ್ಕಾರವನ್ನು ಜನರು ಆಯ್ಕೆ ಮಾಡಿದ್ದಾರೆ. ಅಂದರೆ ಅವರು ಈ ನಿರ್ಣಾಯಕವಾದ ತೀರ್ಪಿನ ಮೂಲಕ ಮಹತ್ತರವಾದುದನ್ನೇ ನಿರೀಕ್ಷಿಸುತ್ತಿದ್ದೇವೆ ಎಂದು ಸ್ಪಷ್ಟಪಡಿಸಿದ್ದಾರೆ. ಅವರ ನಿರೀಕ್ಷೆಯನ್ನು ಹುಸಿಗೊಳಿಸದೆ ಇರಲು ನನ್ನ ಸರ್ಕಾರ ಬಸವಣ್ಣನವರ ದೀಕ್ಷಾ ವಾಕ್ಯವಾದ

'ನುಡಿದಂತೆ ನಡೆಯಬೇಕು' ಎಂಬುದನ್ನು ಕರ್ತವ್ಯ ಗೀತೆಯಾಗಿ ಅಳವಡಿಸಿಕೊಂಡಿದೆ.

3. ಜನಪರ ಆಡಳಿತದ ಅನನ್ಯ ಮತ್ತು ಅನುಕರಣೀಯವಾದ ಹಲವು ಮಾದರಿಗಳನ್ನು ಆವಿಷ್ಕರಿಸಿದ ಖ್ಯಾತಿ ಕರ್ನಾಟಕಕ್ಕೆ ಇದೆ. ಈ ಸರ್ಕಾರವನ್ನು ಅಧಿಕಾರಕ್ಕೆ ತಂದಿರುವ ಜನಾದೇಶದ ಸಂದೇಶವೂ ಅದುವೇ ಆಗಿದೆ. ಜನಪರ ಆಡಳಿತ ನೀತಿಗಳನ್ನು ಆವಿಷ್ಕರಿಸುವ ಮತ್ತು ಅಳವಡಿಸಿಕೊಳ್ಳುವ ಮಹಾ ಪರಂಪರೆಯ ವಾರಸುದಾರನಾಗಲು ನನ್ನ ಸರ್ಕಾರವು ಪಣತೊಡುತ್ತಿದೆ.

4. ಮುಂದಿನ ಐದು ವರ್ಷಗಳಲ್ಲಿ ನನ್ನ ಸರ್ಕಾರವು ಜನಕೇಂದ್ರಿತವಾದ ಆರ್ಥಿಕತೆಗೆ ಒತ್ತು ನೀಡುತ್ತದೆ. ಇದರ ಮೂಲಕ ಸಾಮಾಜಿಕವಾಗಿ ಎಲ್ಲರನ್ನೂ ಒಳಗೊಳ್ಳುವ ಮತ್ತು ಸಾಂಸ್ಕೃತಿಕವಾಗಿ ಚೈತನ್ಯರೂಪಿಯಾದ ಆರ್ಥಿಕ ಶಕ್ತಿಯಾಗಿ ಕರ್ನಾಟಕ ಹೊರ ಹೊಮ್ಮುವಂತೆ ಮಾಡುವುದು ನನ್ನ ಸರ್ಕಾರದ ಗುರಿಯಾಗಿದೆ.

5. ಜಾತಿ-ಧರ್ಮಗಳ ಬೇಧದ ವಿರುದ್ಧ ಈ ನೆಲವು ಮೊದಲಿನಿಂದಲೂ ಜೀವಪರ ಸೆಲೆಯನ್ನು ಚಿಮ್ಮುತ್ತಾ ಬಂದಿದೆ. ಕರ್ನಾಟಕದ ಮೊದಲ ಲಭ್ಯ ಕೃತಿ ಕವಿರಾಜಮಾರ್ಗದಲ್ಲಿ ಕವಿ ಶ್ರೀವಿಜಯ `ಪರ ವಿಚಾರಗಳನ್ನು,



ಪರ ಧರ್ಮಗಳನ್ನು, ಪರ ಬದುಕಿನ ನೀತಿಗಳನ್ನು ಗೌರವಿಸುವುದೇ ನಿಜವಾದ ಬಂಗಾರದ ಒಡವೆ'; ಎಂದು ಹೇಳಿದ್ದಾರೆ. ಆನಂತರ ಕನ್ನಡದ ಆದಿಕವಿ ಪಂಪ 'ಮನುಷ್ಯ ಜಾತಿ ತಾನೊಂದೆ ವಲಂ ಅಂದರೆ ಇಡೀ ಮನುಷ್ಯ ಸಂಕುಲವೇ ಒಂದು' ಎಂದು ಹೇಳಿದ್ದಾರೆ. ಕರ್ನಾಟಕತ್ವದ ಸಾಂಸ್ಕೃತಿಕ ಚಹರೆಗಳನ್ನು ರೂಪಿಸಿದ ರಾಷ್ಟ್ರಕವಿ ಕುವೆಂಪು ಅವರು ಇದನ್ನು 'ಸರ್ವ ಜನಾಂಗದ ಶಾಂತಿಯ ತೋಟ' ಎನ್ನುವವರೆಗೆ ಈ ನೆಲವು ಹಾದು ಬಂದ ರೀತಿಯನ್ನು ನಾವಿಲ್ಲಿ ಸ್ಮರಿಸಬೇಕು. ಕರ್ನಾಟಕದ ಜನರು ಈ ಸರ್ಕಾರದಿಂದ ಅದಕ್ಕೆ ಪೂರಕವಾದ ಆಡಳಿತವನ್ನೇ ಬಯಸಿದ್ದಾರೆ.

6. ಸಾರ್ವಜನಿಕವಾಗಿ ಸಂವಿಧಾನಬದ್ಧವಾದ, ಶಾಂತಿ ಮತ್ತು ಪ್ರೇಮಭಾವದಿಂದ ಇರಲು ಬೇಕಾದ ಮನೋಭಾವವನ್ನು ಎಲ್ಲರಲ್ಲೂ ತರಲು ನಾವು ಪ್ರಯತ್ನಿಸುತ್ತೇವೆ. ಮುಂದಿನ ಐದು ವರ್ಷಗಳಲ್ಲಿ ಬುದ್ಧ, ಬಸವ, ನಾರಾಯಣಗುರು, ಬಾಬಾಸಾಹೇಬ್ ಅಂಬೇಡ್ಕರ್, ಕುವೆಂಪುರವರಂತಹವರು ಕನಸು ಕಂಡಿದ್ದ ಸಮ ಸಮಾಜ ನಿರ್ಮಾಣ ಮಾಡುವುದಕ್ಕೆ ನಾವು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ.

7. ಸಂಕುಚಿತವಾದಿ ಮನಸ್ಸುಗಳು ಗಂಡು-ಹೆಣ್ಣುಗಳ ನಡುವೆ ಹಾಗೂ ಸಮಾಜದ ವಿವಿಧ ಸಮುದಾಯಗಳ ನಡುವೆ ತಾರತಮ್ಯ, ಒಡಕುಗಳನ್ನು ಸೃಷ್ಟಿಸಿತ್ತು. ಸಮಾಜದ ವಿವಿಧ

ಪದರಗಳಲ್ಲಿ ಈ ರೀತಿಯ ಮನಸ್ಥಿತಿಯ ಅವಶೇಷಗಳು ಇನ್ನೂ ಜೀವಂತವಾಗಿ ಉಳಿದುಕೊಂಡಿವೆ. ಅದಕ್ಕೆ ವಿರುದ್ಧವಾಗಿಯೇ ಬಾಬಾಸಾಹೇಬ್ ಅಂಬೇಡ್ಕರವರ ನೇತೃತ್ವದಲ್ಲಿ ಸಂವಿಧಾನ ರಚನೆಯಾಯಿತು. ಸಂವಿಧಾನವು ತೋರಿಸಿರುವ ದಾರಿಯಲ್ಲಿ ನಡೆದು ಸಮಾಜದ ಎಲ್ಲ ವರ್ಗಗಳ ಜನರನ್ನು ಅಭಿವೃದ್ಧಿ ಮತ್ತು ನೆಮ್ಮದಿಯ ಕಡೆಗೆ ಮುನ್ನಡೆಸಲು ನನ್ನ ಸರ್ಕಾರವು ಬದ್ಧವಾಗಿದೆ. ದ್ವೇಷರಹಿತ, ಪ್ರೀತಿಯುಕ್ತ ಸಮಾಜವನ್ನು ನಿರ್ಮಾಣ ಮಾಡಲು ಈ ಸರ್ಕಾರವು ಹಲವು ಬಗೆಯ ಕ್ರಮಗಳನ್ನು ಕೈಗೊಳ್ಳಲಿದೆ.

8. ಇಂದು ರಾಜ್ಯಗಳ ವಿತ್ತೀಯ, ಆಡಳಿತಾತ್ಮಕ ಮತ್ತು ಶಾಸನಾತ್ಮಕ ಸ್ವಾಯತ್ತತೆಗಳನ್ನು ಸಮರ್ಥವಾಗಿ ಬಲಪಡಿಸಬೇಕಾಗಿದೆ. ಇವೆಲ್ಲದರ ಪರಿಣಾಮವಾಗಿ ಒಮ್ಮೆ ಇಡೀ ದೇಶದಲ್ಲಿ ತಲೆಯೆತ್ತಿ ನಿಂತಿದ್ದ, ದೇಶದ ಬೊಕ್ಕಸಕ್ಕೆ ಅಪಾರ ಕೊಡುಗೆ ನೀಡುತ್ತಿರುವ ಈ ರಾಜ್ಯವು ಒಂದು ರೀತಿಯ ಸಂಕಟದ ಸ್ಥಿತಿಯಲ್ಲಿ ನಿಂತುಬಿಟ್ಟಿದೆ. ಈ ಆರ್ಥಿಕ ಸ್ಥಿತಿಯಿಂದ ಕರ್ನಾಟಕವನ್ನು ಮೇಲೆತ್ತುವುದು ನನ್ನ ಸರ್ಕಾರದ ಆದ್ಯತೆಯಾಗಲಿದೆ. ರಾಜ್ಯದ ಜನ ಕಲ್ಯಾಣ ಮತ್ತು ಆರ್ಥಿಕ ಸ್ಥಿತಿ ಎರಡನ್ನೂ ಸಮತೂಕದಲ್ಲಿ ನಿಭಾಯಿಸಿ ಕರ್ನಾಟಕದ್ದೇ ಆದ ಹೊಸ ಆಡಳಿತ ಮಾದರಿಯನ್ನು ನನ್ನ ಸರ್ಕಾರ ದೇಶಕ್ಕೆ ಪರಿಚಯಿಸಲಿದೆ.



9. ಅನ್ನವನು ನೀಡುವುದು ನನ್ನಿಯನು ನುಡಿಯುವುದು, ತನ್ನಂತೆ ಪರರ ಬಗೆದೊಡೆ ಕೈಲಾಸ ಬಿನ್ನಾಣವಕ್ಕು ಸರ್ವಜ್ಞ ಎಂದು ಕನ್ನಡದ ಕವಿ ಸರ್ವಜ್ಞ ಹೇಳಿದ್ದಾರೆ. ನನ್ನ ಸರ್ಕಾರ ಐದು ಗ್ಯಾರಂಟಿಗಳ ಮೂಲಕ ಸಾಧಿಸಲು ಹೊರಟಿರುವುದೂ ಇದನ್ನೇ. ಅದರ ಅನುಷ್ಠಾನವನ್ನು ಶ್ರದ್ಧೆ ಮತ್ತು ನೈಜವಾದ ಕಾಳಜಿಗಳಿಂದ ಪ್ರಾರಂಭಿಸಿದ್ದೇವೆ.

10. ಆಹಾರ ಭದ್ರತೆ ಕಾಯ್ದೆಯ ಅಡಿಯಲ್ಲಿ ಪ್ರಸ್ತುತ 5 ಕೆಜಿ ಅಕ್ಕಿಯನ್ನು ಕೊಡಲಾಗುತ್ತಿದೆ. ಇದರ ಜೊತೆಗೆ ನನ್ನ ಸರ್ಕಾರದ ಅನ್ನಭಾಗ್ಯ ಯೋಜನೆಯಡಿ ರಾಜ್ಯದ ಬಡತನ ರೇಖೆಗಿಂತ ಕೆಳಗಿರುವ ಪ್ರತಿ ಕುಟುಂಬದ ಪ್ರತಿ ಸದಸ್ಯರಿಗೆ ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿಯನ್ನು ಪ್ರತಿ ತಿಂಗಳು ಉಚಿತವಾಗಿ ಕೊಡಲು ತಕ್ಷಣದಿಂದಲೇ ಪ್ರಾರಂಭಿಸುತ್ತಿದ್ದೇವೆ. ಇದರ ಮೂಲಕ ಪ್ರತಿ ತಿಂಗಳು 10 ಕೆ.ಜಿ. ಅಕ್ಕಿಯನ್ನು ಉಚಿತವಾಗಿ ನೀಡುವ ಮೂಲಕ ಹಸಿವು ಮುಕ್ತ ನಾಡನ್ನು ಕಟ್ಟಲು ನಾವು ಬದ್ಧರಾಗಿದ್ದೇವೆ. ತಕ್ಷಣದಿಂದಲೇ ಈ ಯೋಜನೆಯನ್ನು ಪ್ರಾರಂಭಿಸುತ್ತಿರುವುದರಿಂದ ಅಗತ್ಯವಿರುವ ಹೆಚ್ಚುವರಿ ಅಕ್ಕಿ ದೊರೆಯುವವರೆಗೆ ಪ್ರತಿ ತಿಂಗಳು, ಬಡತನ ರೇಖೆಗಿಂತ ಕೆಳಗೆ ಇರುವ ಪ್ರತಿ ಕುಟುಂಬದ ಪ್ರತಿ ಸದಸ್ಯರಿಗೆ ಪ್ರತಿ ಕೆ.ಜಿ ಅಕ್ಕಿಗೆ ಬದಲಿಯಾಗಿ ರೂ.34 ರಂತೆ ಹಣವನ್ನು ಅವರವರ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ [ಡಿಬಿಟಿ] ಯೋಜನೆಡಿಯಲ್ಲಿ ವರ್ಗಾವಣೆ

ಮಾಡುತ್ತೇವೆ. ಅದಕ್ಕಾಗಿ ಯಾವುದೇ ತ್ಯಾಗ ಮಾಡಿಯಾದರೂ ಸರಿ ನನ್ನ ಸರ್ಕಾರವು ಈ ಯೋಜನೆಯನ್ನು ಅನುಷ್ಠಾನ ಮಾಡುತ್ತದೆ.

11. ಹಸಿದವರಿಗೆ ಅನ್ನ ನೀಡದ ಸರ್ಕಾರ ಅತ್ಯಂತ ಜನದ್ರೋಹಿ ಸರ್ಕಾರ ಎಂದು ಕರೆಸಿಕೊಳ್ಳುತ್ತದೆ. ಬಡವರು, ದುಡಿಯುವ ವರ್ಗದ ಜನರು, ವಲಸೆ ಕಾರ್ಮಿಕರು, ನಿರಾಶ್ರಿತರು ಮುಂತಾದವರ ಹಸಿವನ್ನು ತಣಿಸಲು ಹಿಂದೆ ಇಂದಿರಾ ಕ್ಯಾಂಟೀನ್‌ಗಳನ್ನು ಸ್ಥಾಪಿಸಲಾಗಿತ್ತು. ಈ ಕ್ಯಾಂಟೀನ್‌ಗಳು ಲಕ್ಷಾಂತರ ಜನರ ಹಸಿದ ಹೊಟ್ಟೆ ತುಂಬಿಸಿ ತೃಪ್ತಿ ನೀಡಿವೆ. ಇವುಗಳನ್ನು ಇನ್ನೂ ಸಮರ್ಥವಾಗಿ ನಾವು ನಡೆಸುತ್ತೇವೆ. ಅನ್ನಭಾಗ್ಯ ಯೋಜನೆ ಮತ್ತು ಇಂದಿರಾ ಕ್ಯಾಂಟೀನ್‌ಗಳ ಮೂಲಕ ನನ್ನ ಸರ್ಕಾರವು ರಾಜ್ಯವನ್ನು ಹಸಿವು ಮುಕ್ತ ಮಾಡಲಿದೆ.

12. ಯುವನಿಧಿ ಯೋಜನೆಯ ಅಡಿಯಲ್ಲಿ 2022-23 ರಲ್ಲಿ ಉತ್ತೀರ್ಣರಾಗಿ 6 ತಿಂಗಳೊಳಗೆ ಉದ್ಯೋಗ ದೊರಕದ ನಿರುದ್ಯೋಗಿ ಪದವೀಧರ/ ಸ್ನಾತಕೋತ್ತರ ಪದವೀಧರರಿಗೆ ತಿಂಗಳಿಗೆ ರೂ.3,000/- ಮತ್ತು ನಿರುದ್ಯೋಗಿ ಡಿಪ್ಲೋಮಾದಾರರಿಗೆ ಪ್ರತಿ ತಿಂಗಳಿಗೆ ರೂ.1,500/- ನೀಡುವ ಯೋಜನೆಯನ್ನು ನನ್ನ ಸರ್ಕಾರವು ರೂಪಿಸಿದೆ. ಈ ಯೋಜನೆಯಡಿ ಅವರಿಗೆ 24 ತಿಂಗಳುಗಳ ಕಾಲ ಅಥವಾ



ಉದ್ಯೋಗ ಸಿಗುವವರೆಗೆ/ಸ್ವ-ಉದ್ಯೋಗ ಪ್ರಾರಂಭಿಸಿ ಸ್ವಾವಲಂಬಿಗಳಾಗುವವರೆಗೆ - ಯಾವುದು ಮೊದಲೋ ಅಲ್ಲಿಯವರೆಗೆ ಭತ್ಯೆಯನ್ನು ನೀಡಲಾಗುವುದು. ಇದರಿಂದಾಗಿ ಯುವಕರು ಮತ್ತು ಅವರ ಕುಟುಂಬಗಳಿಗೆ ಹೆಚ್ಚು ಅಗತ್ಯವಿರುವ ಬೆಂಬಲ ಮತ್ತು ಘನತೆಯನ್ನು ಒದಗಿಸಿದಂತಾಗುವುದು.

13. ಗೃಹಜ್ಯೋತಿ ಯೋಜನೆಯಲ್ಲಿ 200 ಯೂನಿಟ್‌ಗಳವರೆಗೆ ಉಚಿತ ವಿದ್ಯುತ್ ನೀಡುವುದರಿಂದ ಸುಮಾರು 2.14 ಕೋಟಿ ಕುಟುಂಬಗಳ ಗ್ರಾಹಕರಿಗೆ ಪ್ರಯೋಜನವಾಗುತ್ತದೆ. ಇದರಿಂದಾಗಿ ರಾಜ್ಯದ ಶೇ.98 ರಷ್ಟು ಕುಟುಂಬಗಳು ಈ ಯೋಜನೆಯ ವ್ಯಾಪ್ತಿಗೆ ಬರುತ್ತವೆ ಎಂಬುದು ನನ್ನ ಸರ್ಕಾರಕ್ಕೆ ಸಂತೋಷ ನೀಡುವ ಸಂಗತಿಯಾಗಿದೆ.

14. ನನ್ನ ಸರ್ಕಾರವು ಮಹಿಳಾ ಸಬಲೀಕರಣಕ್ಕಾಗಿ ಗೃಹಲಕ್ಷ್ಮಿ ಎಂಬ ಯೋಜನೆಯನ್ನು ಜಾರಿಗೆ ತಂದಿದೆ. ಈ ಯೋಜನೆಯಡಿ ಪ್ರತಿ ತಿಂಗಳು ಕುಟುಂಬದ ಮುಖ್ಯಸ್ಥರಾಗಿರುವ ಮಹಿಳೆಯರಿಗೆ ರೂ.2,000/- ನೀಡುತ್ತೇವೆ. ಬೆಲೆ ಏರಿಕೆಯಿಂದಾಗಿ ತತ್ತರಿಸಿರುವ ಮಹಿಳೆಯರಿಗೆ ಇದರಿಂದಾಗಿ ಆರ್ಥಿಕ ಚೈತನ್ಯ ಲಭಿಸಲಿದೆ.

15. ಇಂದು ಜಗತ್ತಿನ ಅನೇಕ ದೇಶಗಳು ಜನಕೇಂದ್ರಿತ ಆರ್ಥಿಕತೆಯನ್ನು ಪ್ರತಿಪಾದಿಸುತ್ತಿವೆ. ಈ ದೇಶಗಳಲ್ಲಿ ಸಾರ್ವತ್ರಿಕ ಮೂಲ ಆದಾಯ (Universal Basic Income) ಎಂಬ ಪರಿಕಲ್ಪನೆಯು ಪ್ರಬಲಗೊಳ್ಳುತ್ತಿದೆ. ಇದು ಉಳ್ಳವರು ಮತ್ತು ಇಲ್ಲದವರ ನಡುವಿನ ಅಂತರವನ್ನು ತುಸುವಾದರೂ ಕಡಿಮೆ ಮಾಡಲು ಸಹಕಾರಿಯಾಗುತ್ತಿದೆ. ಮಾನವೀಯತೆ ಮತ್ತು ಅಭಿವೃದ್ಧಿಪರ ಚಿಂತನೆಯೊಂದಿಗೆ ವಿಕಾಸವಾಗುತ್ತಿರುವ ಈ ಆರ್ಥಿಕ ನೀತಿಯು, ಸಂಪತ್ತು ಕೆಲವರ ಕೈಯಲ್ಲೇ ಕೇಂದ್ರೀಕೃತಗೊಳ್ಳುವುದನ್ನು ಇಲ್ಲವಾಗಿಸುತ್ತದೆ. ಒಂದರ್ಥದಲ್ಲಿ ಇದು ಬೆಲೆ ಏರಿಕೆ ಹಾಗೂ ಕಡಿಮೆ ಆದಾಯದಿಂದ ತತ್ತರಿಸಿರುವ ಜನರಿಗೆ ಘನತೆಯನ್ನು ತಂದುಕೊಡುತ್ತದೆ. ನನ್ನ ಸರ್ಕಾರವು ಈ ಯೋಜನೆಗಳ ಮೂಲಕ ಹೊಸ ಅಭಿವೃದ್ಧಿ ಮಾದರಿಯೊಂದನ್ನು ರೂಪಿಸಿ ಅನುಷ್ಠಾನ ಮಾಡುತ್ತಿದೆ.

16. ನಾವು ಜನರಿಗೆ ಅವರಿಂದಲೇ ಸೃಷ್ಟಿಯಾದ ಸಂಪತ್ತಿನಲ್ಲಿ ಒಂದು ಪಾಲನ್ನು ಕೊಡುವ ಕೆಲಸವನ್ನು ಮಾಡುತ್ತಿದ್ದೇವೆ. ಆ ಮೂಲಕ ಸಂವಿಧಾನದ ರಾಜ್ಯ ನಿರ್ದೇಶಕ ತತ್ವಗಳ ಅನುಚ್ಛೇದ 38, 39 (a), (b) ಮತ್ತು (c) ಗಳ ಪರೋಕ್ಷ ಅನುಷ್ಠಾನವನ್ನೂ ಸರ್ಕಾರ ಮಾಡುತ್ತಿದೆ. ಸರ್ಕಾರಗಳು ಆಡಳಿತ ನಡೆಸಬೇಕಾದರೆ, ಕಾನೂನುಗಳನ್ನು ತರಬೇಕಾದರೆ ಕಡ್ಡಾಯವಾಗಿ ಈ ತತ್ವಗಳನ್ನು



ಗಮನದಲ್ಲಿಟ್ಟುಕೊಳ್ಳಬೇಕಾಗುತ್ತದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರಕಾರ ರಾಜ್ಯ ನಿರ್ದೇಶಕ ತತ್ವಗಳು ಜನರ ಹಕ್ಕುಗಳಾದ ದಿನ ಜನರಿಗೆ ಒಂದಿಷ್ಟಾದರೂ ನೆಮ್ಮದಿ ಲಭಿಸಲಿದೆ. ಈ ಮಾತುಗಳನ್ನು ದಾರಿ ದೀಪ ಮಾಡಿಕೊಂಡು ನನ್ನ ಸರ್ಕಾರ ಮುನ್ನಡೆಯಲಿದೆ.

17. ಹಲವು ಕಾರಣಗಳಿಂದ ನಮ್ಮ ವ್ಯವಸ್ಥೆಯೊಳಗೆ ಭ್ರಷ್ಟಾಚಾರವು ಸಾಂಸ್ಥೀಕರಣಗೊಳ್ಳುವ ಮಟ್ಟಕ್ಕೆ ಬೇರು ಬಿಟ್ಟಿದೆ. ಇದನ್ನು ತೊಡೆದು ಹಾಕುವುದು ದೊಡ್ಡ ಸವಾಲು. ಈ ಸವಾಲನ್ನು ಎದುರಿಸಿ, ಭ್ರಷ್ಟಾಚಾರವನ್ನು ಮೂಲೋಚ್ಚಾಟನೆ ಮಾಡಲು ನಾನು ನಿಮ್ಮೆಲ್ಲರ ಸಹಕಾರವನ್ನು ಕೋರುತ್ತೇನೆ. ಈ ನಿಟ್ಟಿನಲ್ಲಿ ಅಗತ್ಯವಿರುವ ಆಡಳಿತಾತ್ಮಕ, ಶಾಸನಾತ್ಮಕ ಕ್ರಮಗಳನ್ನು ಈ ಸರ್ಕಾರವು ತೆಗೆದುಕೊಳ್ಳುತ್ತದೆ.

18. ನನ್ನ ಸರ್ಕಾರವು ಆಡಳಿತವನ್ನು ಪವಿತ್ರ ಕರ್ತವ್ಯವೆಂದು ಪರಿಗಣಿಸುತ್ತದೆ. ಬಡವರು, ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದವರ ಪರವಾಗಿ ನಿಲ್ಲುತ್ತದೆ. ಜೊತೆಗೆ ಎಲ್ಲಾ ಜಾತಿ, ಧರ್ಮ ಮತ್ತು ಪಂಗಡಗಳ ಜನರು ತಮ್ಮ ನ್ಯಾಯಯುತ ಪಾಲನ್ನು ಪಡೆಯುವಂತೆ ಮಾಡುವುದು ನನ್ನ ಸರ್ಕಾರದ ಗುರಿಯಾಗಿದೆ.

19. ಜನಸಂಖ್ಯೆಯ ಬಹುಭಾಗ ಸುಶಿಕ್ಷಿತವಾಗುತ್ತಾ ಬಂದಿದೆ. ಅತ್ಯಾಧುನಿಕ ತಂತ್ರಜ್ಞಾನವು ಇಡೀ ಜಗತ್ತನ್ನೇ ಬೆಸೆಯುತ್ತಿದೆ. ಹಾಗಿರುವಾಗ ಸಮಾಜದ ಸಾಮರಸ್ಯವನ್ನು ಕದಡುವ ಗುಣವುಳ್ಳ ಬೆರಳೆಣಿಕೆಯ ಜನರ ದುಷ್ಟ ಚಿಂತನೆಗಳು ಈ ಮಧ್ಯೆ ತಲೆಯೆತ್ತಿವೆ. ಭಿನ್ನ ಸಂಸ್ಕೃತಿಗಳ ಜನರು ಒಂದುಗೂಡಿ ಬದುಕುವುದೇ ಕರ್ನಾಟಕತ್ವದ ನಿಜವಾದ ತತ್ವ ಎಂಬುದನ್ನು ಸಾವಿರಕ್ಕೂ ಹೆಚ್ಚು ವರ್ಷಗಳಿಂದ ಈ ನೆಲ ಪೊರೆಯುತ್ತಾ ಬಂದಿದೆ. ಕರ್ನಾಟಕದ ಜನತೆ ಈ ಭಾರಿ ಕರ್ನಾಟಕದ ಹೆಮ್ಮೆಯ ಸಂಸ್ಕೃತಿಯಾದ ಪ್ರೇಮತತ್ವ ಹಾಗೂ ಸಹಬಾಳ್ವೆಯ ಪರವಾಗಿ ನಿಂತಿದ್ದಾರೆ. ನನ್ನ ಸರ್ಕಾರವು ಜನರ ಈ ಧೀರೋದಾತ್ತವಾದ ಆಶಯವನ್ನು ಈಡೇರಿಸಲು ಬದ್ಧವಾಗಿದೆ. ಅದಕ್ಕೆ ಪೂರಕವಾದ ಒಳ್ಳೆಯ ಚಿಂತನೆಗಳನ್ನು ಅಳವಡಿಸಿಕೊಳ್ಳಲಿದೆ ಮತ್ತು ಜನರನ್ನು ಪರಸ್ಪರ ಬೆಸೆಯುವ ಕ್ರಮಗಳನ್ನು ಕೈಗೊಳ್ಳಲಿದೆ.

20. ನನ್ನ ಸರ್ಕಾರವು ಕೃಷಿ, ಕೈಗಾರಿಕೆ ಮತ್ತು ಸೇವಾವಲಯವನ್ನು ಸಮಾನ ದೃಷ್ಟಿಯಲ್ಲಿ ಪರಿಗಣಿಸಿ ಆಧುನಿಕ ಕರ್ನಾಟಕವನ್ನು ನಿರ್ಮಾಣ ಮಾಡಲು ಉದ್ದೇಶಿಸಿದೆ.



21. ಶಾಲಾ ಶಿಕ್ಷಣವು ಸಮಾಜದ ಅಡಿಪಾಯವೆಂದು ಗುರುತಿಸಲ್ಪಟ್ಟಿದೆ. ಪ್ರತಿ ಮಗುವಿನ ಮೂಲಭೂತ ಹಕ್ಕನ್ನು ಸಂರಕ್ಷಿಸಲು ನನ್ನ ಸರ್ಕಾರ ಬದ್ಧವಾಗಿದೆ. ಇದಕ್ಕಾಗಿ ನಾವು ವಿಶೇಷವಾದ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತೇವೆ. ಪ್ರತಿ ಮಗುವು ಕೂಡ ದೇಶದ ಸಂಪತ್ತು ಎಂಬ ಪ್ರಾಥಮಿಕ ತಿಳುವಳಿಕೆಯ ಮೂಲಕ ಆಡಳಿತ ನಡೆಸಲು ನಾವು ಬದ್ಧರಾಗಿದ್ದೇವೆ. ಶಿಕ್ಷಣದ ಜೊತೆಗೆ ಮಕ್ಕಳ ಆರೋಗ್ಯ ರಕ್ಷಣೆಯೂ ನನ್ನ ಸರ್ಕಾರದ ಜವಾಬ್ದಾರಿಯಾಗಿದೆ. ಈ ಜವಾಬ್ದಾರಿಯನ್ನು ನನ್ನ ಸರ್ಕಾರವು ಸಮರ್ಥವಾಗಿ ನಿಭಾಯಿಸುತ್ತದೆ.

22. ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ತರಗತಿಗಳಲ್ಲಿ ನುರಿತ ಪ್ರಾಧ್ಯಾಪಕರಂತೆಯೇ ಸ್ಥಳೀಯ ಜ್ಞಾನದ ಪರ್ವತಗಳಾಗಿರುವ ರೈತರು, ಕುಶಲಕರ್ಮಿಗಳು, ವಿವಿಧ ಕ್ಷೇತ್ರಗಳ ತಜ್ಞರು ಪಾಲ್ಗೊಳ್ಳುವುದು ಅಗತ್ಯ. ಅದಕ್ಕೆ ಬೇಕಿರುವ ಆಡಳಿತಾತ್ಮಕ ಚೌಕಟ್ಟುಗಳನ್ನು ನನ್ನ ಸರ್ಕಾರ ರೂಪಿಸಿ ಅನುಷ್ಠಾನ ಮಾಡುತ್ತದೆ.

23. ನಮ್ಮ ಶಿಕ್ಷಣದಲ್ಲಿ ಕರುಣೆ, ಬುದ್ಧಿ ಮತ್ತು ಕೌಶಲ್ಯಗಳು ಏಕೀಭವಿಸಿದ ವ್ಯವಸ್ಥೆಯನ್ನು ನಿರ್ಮಾಣ ಮಾಡಬೇಕಾಗಿದೆ. ಕೈ ಕಾಲುಗಳ ಮೂಲಕ ಕೌಶಲ್ಯವನ್ನು, ಮೆದುಳು, ಹೃದಯದ ಮೂಲಕ ಬುದ್ಧಿ-ಕರುಣೆಗಳು

ಸೇರಿದ ಸಮಗ್ರ ಶಿಕ್ಷಣವನ್ನು ರೂಪಿಸಲು ಬೇಕಾದ ವ್ಯವಸ್ಥೆಯನ್ನು ನನ್ನ ಸರ್ಕಾರವು ರಚಿಸಲಿದೆ. ಇದು ಸಾಧ್ಯವಾಗಬೇಕಾದರೆ ನಿರ್ಭೀತ, ಮುಕ್ತ, ಉದಾರ, ವೈಚಾರಿಕ ಮತ್ತು ವೈಜ್ಞಾನಿಕವೂ ಆದ ತಜ್ಞರು, ಚಿಂತನಶೀಲ ಜನರು, ಬುದ್ಧಿವಂತರು ಪೂರ್ಣ ಪ್ರಮಾಣದಲ್ಲಿ ಭಾಗವಹಿಸುವ ವ್ಯವಸ್ಥೆ ನಿರ್ಮಾಣವಾಗಬೇಕು.

24. ಅತ್ಯುತ್ತಮವಾದ ಉನ್ನತ ಶಿಕ್ಷಣ ವ್ಯವಸ್ಥೆಯನ್ನು ರೂಪಿಸಲು ನಾವು ಸಿದ್ಧರಾಗಿದ್ದೇವೆ. ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಸಾಮರಸ್ಯದ ವಾತಾವರಣದಲ್ಲಿ ನಮ್ಮ ಮಕ್ಕಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ನನ್ನ ಸರ್ಕಾರವು ಸಂಪೂರ್ಣ ಗಮನ ನೀಡುತ್ತದೆ.

25. ಪರಿಶಿಷ್ಟ ಜಾತಿ, ಪಂಗಡದ ಜನರ ಭೂಮಿಗಳ ರಕ್ಷಣೆಗೆ ಸಂಬಂಧಿಸಿದಂತೆ ಪಿ.ಟಿ.ಸಿ.ಎಲ್ ಕಾಯ್ದೆಗೆ ಅಗತ್ಯ ಇರುವ ತಿದ್ದುಪಡಿಗಳನ್ನು ತರಲಾಗುವುದು. ದಮನಿತ ಸಮುದಾಯಗಳ ಯುವಜನರಿಗೆ ಸಶಕ್ತವಾದ ಕೌಶಲ್ಯಭರಿತ ತರಬೇತಿಗಳನ್ನು ನೀಡಿ ಉದ್ಯೋಗಗಳನ್ನು ಪಡೆದು ಸ್ವಾವಲಂಬಿಗಳಾಗುವಂತೆ ಮಾಡಲು ನನ್ನ ಸರ್ಕಾರವು ಎಲ್ಲ ಕ್ರಮಗಳನ್ನು ಕೈಗೊಳ್ಳಲಿದೆ.



26. ಪೌರಕಾರ್ಮಿಕರು, ಚಾಲಕರು, ಬೀದಿಬದಿ ವ್ಯಾಪಾರಿಗಳು, ಗಾರ್ಮೆಂಟ್ ಕೆಲಸಗಾರರು, ಕಟ್ಟಡ ಕಾರ್ಮಿಕರು, ಅಸಂಘಟಿತ ಮತ್ತು ಗಿಗ್ ಕಾರ್ಮಿಕರು, ಹಿರಿಯ ನಾಗರಿಕರು, ವಿಶೇಷ ಚೇತನರು, ದೇವದಾಸಿಯರು, ಲೈಂಗಿಕ ಅಲ್ಪಸಂಖ್ಯಾತರು ಸೇರಿದಂತೆ ಎಲ್ಲ ವರ್ಗಗಳ ಕಲ್ಯಾಣವನ್ನು ಕೈಗೆತ್ತಿಕೊಳ್ಳಲಿದೆ. ಅಲ್ಲದೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರಿಗೆ ಶಿಕ್ಷಣ, ಹಾಸ್ಟೆಲ್, ವಸತಿ ಮತ್ತು ಉದ್ಯೋಗಗಳ ಸವಲತ್ತುಗಳನ್ನು ಒದಗಿಸುವುದಕ್ಕಾಗಿ ನನ್ನ ಸರ್ಕಾರವು ಕ್ರಿಯಾಶೀಲವಾದ ಹಲವು ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಿದೆ.

27. ನನ್ನ ಸರ್ಕಾರವು ಎಲ್ಲರಿಗೂ ಅತ್ಯುತ್ತಮ ಆರೋಗ್ಯ ವ್ಯವಸ್ಥೆಯನ್ನು ನೀಡಬೇಕೆಂಬ ಮಹತ್ತರವಾದ ಗುರಿಯನ್ನು ನಿಗದಿಪಡಿಸಿಕೊಂಡಿದೆ. ಅಸ್ತಿತ್ವದಲ್ಲಿರುವ ಸಾಂಸ್ಥಿಕ ಮೂಲಸೌಕರ್ಯವನ್ನು ಸುಧಾರಿಸಿ ನಾಗರಿಕ ಸ್ನೇಹಿಯಾದ ವ್ಯವಸ್ಥೆಯನ್ನು ರೂಪಿಸಿ ಅನುಷ್ಠಾನ ಮಾಡಲಿದೆ.

28. ಸಾಹಿತ್ಯ, ಸಂಗೀತ, ಕಲೆ ಮತ್ತು ಸಂಸ್ಕೃತಿಗಳು ನಾಗರಿಕ ಸಮಾಜದ ಮಾನಸಿಕ ಆರೋಗ್ಯವನ್ನು ರೂಪಿಸುವ ಸಾಧನಗಳು. ಇವುಗಳನ್ನು ಸಾವಿರಾರು ವರ್ಷಗಳಿಂದ

ನಮ್ಮ ಹಿರಿಯರು ಪೊರೆಯುತ್ತಾ ಬಂದಿದ್ದಾರೆ. ಅದರಲ್ಲೂ ಕರ್ನಾಟಕದ ಸಂಸ್ಕೃತಿಯು ಹಲವು ವೈಶಿಷ್ಟ್ಯಗಳಿಂದ ವಿರಾಜಮಾನವಾಗಿದೆ. ನಾವು ವಿಜ್ಞಾನ-ತಂತ್ರಜ್ಞಾನ ಹಾಗೂ ವಾಣಿಜ್ಯಕ್ಕೆ ಕೊಡುವ ಸ್ಥಾನಮಾನಗಳಂತೆಯೇ ಸಾಹಿತ್ಯ, ಸಂಗೀತ, ಕಲೆ ಮತ್ತು ಸಂಸ್ಕೃತಿಗಳ ವಿಕಾಸಕ್ಕೆ ಸಂಪನ್ಮೂಲಗಳನ್ನು ವಿನಿಯೋಗಿಸಬೇಕಾಗಿದೆ ಎಂಬ ಅರಿವು ನನ್ನ ಸರ್ಕಾರಕ್ಕೆ ಇದೆ. ಅದಕ್ಕಾಗಿ ಅಗತ್ಯವಿರುವ ಎಲ್ಲ ಉಪಕ್ರಮಗಳನ್ನೂ ನನ್ನ ಸರ್ಕಾರವು ಕೈಗೊಳ್ಳುತ್ತದೆ.

29. ಬಡತನ ರೇಖೆಗಿಂತ ಕೆಳಗಿರುವ ಎಲ್ಲರಿಗೂ ವಸತಿಯನ್ನು ಕಲ್ಪಿಸುವುದು ನನ್ನ ಸರ್ಕಾರದ ಪ್ರಧಾನ ಆದ್ಯತೆಯಾಗಿದೆ. ಮುಂದಿನ ಐದು ವರ್ಷಗಳಲ್ಲಿ ಆದ್ಯತೆಯ ಮೇಲೆ ವಸತಿರಹಿತರಿಗೆ ಪಕ್ಕಾ ಮನೆಗಳನ್ನು ನಿರ್ಮಿಸಿಕೊಳ್ಳಲು ರಾಜ್ಯದ ಜನರಿಗೆ ಅಗತ್ಯವಿರುವ ಎಲ್ಲಾ ನೆರವುಗಳನ್ನು ನೀಡಲು ನನ್ನ ಸರ್ಕಾರವು ಬದ್ಧವಾಗಿದೆ.

30. ನನ್ನ ಸರ್ಕಾರವು ಪ್ರಾದೇಶಿಕ ಅಸಮಾನತೆಯನ್ನು ಹೋಗಲಾಡಿಸಲು ಸ್ಪಷ್ಟವಾದ ಯೋಜನೆಯನ್ನು ರೂಪಿಸಿ ಅನುಷ್ಠಾನ ಮಾಡಲು ಬದ್ಧವಾಗಿದೆ. ವಿಶೇಷವಾಗಿ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಆರೋಗ್ಯ, ಶಿಕ್ಷಣ ಮತ್ತು ಅಗತ್ಯ ಸೇವೆಗಳನ್ನು ಒದಗಿಸಲು ಅಗತ್ಯವಿರುವ ಆರ್ಥಿಕ ಮತ್ತು ಆಡಳಿತಾತ್ಮಕ ನೆರವುಗಳನ್ನು ನೀಡಿ ಈ



ಅಸಮಾನತೆಯನ್ನು ಹೋಗಲಾಡಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

31. 2014 ರಲ್ಲಿ ಜಾರಿಯಾದ ಕೃಷಿಭಾಗ್ಯ ಯೋಜನೆಯಿಂದ ರಾಜ್ಯದ ಮಳೆಯಾಶ್ರಿತ ಪ್ರದೇಶಗಳಲ್ಲಿನ ರೈತರು ಕೃಷಿಹೊಂಡ, ಪಾಲಿ ಹೌಸ್ ಮತ್ತು ಶೇಡ್ ನೆಟ್ ಮುಂತಾದ ವ್ಯವಸ್ಥೆ ಬಳಸಿ ಮಾಡಿದ ಕೃಷಿಯಿಂದ ರೈತರು ಹೆಚ್ಚಿನ ಆದಾಯ ಗಳಿಸಲು ಸಾಧ್ಯವಾಗಿದೆಯೆಂದು ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ ವರದಿ ನೀಡಿದ್ದು, ಸದರಿ ಯೋಜನೆಯನ್ನು ಇನ್ನಷ್ಟು ವಿಸ್ತರಿಸಿ ರೈತಾಪಿ ಜನರ ಬದುಕನ್ನು ಸುಧಾರಿಸಲಾಗುವುದು. ನನ್ನ ಸರ್ಕಾರವು ಈ ಯೋಜನೆಯನ್ನು ಬಲಪಡಿಸುತ್ತದೆ ಮತ್ತು ವಿಸ್ತರಿಸುತ್ತದೆ.

32. ನಮ್ಮ ರಾಜ್ಯವು ರಾಜಸ್ಥಾನದ ನಂತರ ಅತಿ ಹೆಚ್ಚು ಒಣಭೂಮಿ ಪ್ರದೇಶವನ್ನು ಹೊಂದಿದೆ. ನೀರಾವರಿಗೂ ಅಭಿವೃದ್ಧಿಗೂ ನೇರವಾದ ಸಂಬಂಧವಿದೆ. ಆದ್ದರಿಂದ ಮುಂದಿನ 5 ವರ್ಷಗಳಲ್ಲಿ ನಮ್ಮ ರಾಜ್ಯವು ಬಹಳ ಕಾಲದಿಂದ ಬಾಕಿ ಉಳಿಸಿಕೊಂಡಿರುವ ಎಲ್ಲ ನೀರಾವರಿ ಯೋಜನೆಗಳನ್ನು ತಾರ್ಕಿಕ ಅಂತ್ಯ ಮುಟ್ಟಿಸಲು ನನ್ನ ಸರ್ಕಾರವು ಬದ್ಧವಾಗಿದೆ. ಬೃಹತ್ ನೀರಾವರಿ ಯೋಜನೆಗಳ ಅನುಷ್ಠಾನದ ಜೊತೆಯಲ್ಲಿ ರೈತರ ಸಹಭಾಗಿತ್ವದಲ್ಲಿ

ಕೆರೆ, ಕಟ್ಟೆ ಮುಂತಾದ ಸಣ್ಣ ಹಾಗೂ ಪಾರಂಪರಿಕ ನೀರಾವರಿ ವ್ಯವಸ್ಥೆಯನ್ನು ಕೂಡ ಅಭಿವೃದ್ಧಿ ಪಡಿಸಲಾಗುವುದು.

33. 2013 ರಿಂದ 2018 ರವರೆಗೆ ಅಧಿಕಾರ ನಡೆಸಿದ್ದ ಸರ್ಕಾರ ಜಾರಿಗೆ ತಂದಿದ್ದ ಪಶುಭಾಗ್ಯ ಯೋಜನೆಯಡಿ ಹಸು ಮತ್ತು ಎಮ್ಮೆಗಳನ್ನು ಪಡೆದ ಫಲಾನುಭವಿಗಳಲ್ಲಿ ಕುಟುಂಬದ ಆದಾಯವು ಹೆಚ್ಚಾಗಿರುವುದು ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರದ ವರದಿಯಿಂದ ಕಂಡುಬಂದಿದ್ದು ಸದರಿ ಯೋಜನೆಯನ್ನು ಇನ್ನಷ್ಟು ಸಶಕ್ತಗೊಳಿಸಿ ರೈತರ ಆದಾಯ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದು.

34. ಪ್ರಾಕೃತಿಕ ವಿಕೋಪಗಳನ್ನು ಹೊರತು ಪಡಿಸಿ ಆಕಸ್ಮಿಕವಾಗಿ ಅಥವಾ ಇನ್ನಿತರೆ ಕಾರಣಗಳಿಂದ ಕುರಿ, ಮೇಕೆ, ಹಸು, ಎಮ್ಮೆ ಮುಂತಾದವು ಮರಣ ಹೊಂದಿದರೆ ಅವುಗಳನ್ನು ಸಾಕುವ ಪಶುಪಾಲಕರಿಗೆ ವಿಪರೀತ ನಷ್ಟ ಸಂಭವಿಸುತ್ತದೆ. ಇದನ್ನು ನಿವಾರಿಸುವ ದೃಷ್ಟಿಯಿಂದ ರಾಜ್ಯದಲ್ಲಿ ಅನುಗ್ರಹ ಎಂಬ ಯೋಜನೆಯನ್ನು ಜಾರಿಗೆ ತರಲಾಗಿತ್ತು. ಆದರೆ ಹಿಂದಿನ ಕೆಲವು ವರ್ಷಗಳಲ್ಲಿ ಈ ಯೋಜನೆಯು ಕ್ರಿಯಾಶೀಲವಾಗಿರಲಿಲ್ಲ. ಆದ್ದರಿಂದ ಈ ವರ್ಷದಿಂದಲೇ ಅನುಗ್ರಹ ಯೋಜನೆಯನ್ನು ಸಮರ್ಥವಾಗಿ ನಮ್ಮ ಸರ್ಕಾರವು ಮತ್ತೆ ಅನುಷ್ಠಾನ ಮಾಡಲಿದೆ.



35. ನಮ್ಮ ರೈತಾಪಿ ಜನರ ಆದಾಯದಲ್ಲಿ ಗಣನೀಯ ಪಾಲು ಪಶುಪಾಲನೆಯಿಂದ ಬರುತ್ತಿದೆ. ಹಾಗಾಗಿ ಪಶುಪಾಲನೆಯನ್ನು ಪ್ರೋತ್ಸಾಹಿಸುವ ಅಗತ್ಯವಿದೆ. ಆದ್ದರಿಂದಲೇ ಪಶುಪಾಲಕರಿಗೆ ಅಗತ್ಯ ಹಣಕಾಸಿನ ಸಾಲ, ನೆರವು ಇತ್ಯಾದಿಗಳನ್ನು ಹೆಚ್ಚಿಸಿ ಗ್ರಾಮೀಣ ಆರ್ಥಿಕತೆಗೆ ಚೈತನ್ಯ ತರಲು ನನ್ನ ಸರ್ಕಾರವು ಬದ್ಧವಾಗಿದೆ. ಜೊತೆಗೆ ಅಲೆಮಾರಿ ಕುರಿಗಾರರ ರಕ್ಷಣೆಗೆ ಪ್ರತ್ಯೇಕ ಕಾಯ್ದೆಯನ್ನು ಜಾರಿಗೆ ತರಲು ನನ್ನ ಸರ್ಕಾರವು ಬದ್ಧವಾಗಿದೆ. ನಮ್ಮ ಗ್ರಾಮೀಣ ಕರ್ನಾಟಕದ ಪ್ರಮುಖ ಆರ್ಥಿಕ ಮೂಲಗಳಲ್ಲಿ ಹೈನುಗಾರಿಕೆಯೂ ಒಂದು. ಹೈನುಗಾರಿಕೆಯು ರೈತಾಪಿ ಜನರ ಬದುಕಿನ ಆಧಾರಸ್ತಂಭವಾಗಿದೆ. ನನ್ನ ಸರ್ಕಾರವು ನಮ್ಮದೇ ಹೈನುಗಾರರ ಮೂಲಕ ಹಾಲಿನಲ್ಲಿ ಸ್ವಾವಲಂಬನೆಯನ್ನು ಖಚಿತಪಡಿಸುತ್ತದೆ.

36. ರೈತರು ನಮ್ಮ ಅನ್ನದಾತರಾಗಿದ್ದಾರೆ. ಅವರಿಗೆ ಅಗತ್ಯವಿರುವ ರಸಗೊಬ್ಬರ, ಬೀಜ, ಔಷಧ ಮತ್ತು ಇತರ ಸೌಲಭ್ಯಗಳನ್ನು ಸರಿಯಾದ ಸಮಯಕ್ಕೆ ಸಮರ್ಪಕವಾಗಿ ಪೂರೈಸುವ ಮೂಲಕ ನನ್ನ ಸರ್ಕಾರವು ರೈತಾಪಿ ಜನರ ಬದುಕನ್ನು ಸುಧಾರಿಸಲು ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳಲಿದೆ.

37. ನಾವು ಕೃಷಿ ವ್ಯವಸ್ಥೆಯನ್ನು ಸಮಗ್ರ ದೃಷ್ಟಿಕೋನದ ಮೂಲಕ ಮುನ್ನಡೆಸಬಯಸಿದ್ದೇವೆ. ನಮ್ಮ ರೈತರ ಪಾರಂಪರಿಕ ಜ್ಞಾನ ಹಾಗೂ ಆಧುನಿಕ ವೈಜ್ಞಾನಿಕ ಪದ್ಧತಿಗಳು ಸಮ್ಮಿಲನಗೊಂಡ ವ್ಯವಸ್ಥೆಯನ್ನು ರೂಪಿಸಬಯಸಿದ್ದೇವೆ. ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಲು ಅಗತ್ಯವಿರುವ ಮಾರುಕಟ್ಟೆಗಳನ್ನು ಮರು ನಿರ್ಮಾಣ ಮಾಡಲಿದ್ದೇವೆ. ಎ.ಪಿ.ಎಂ.ಸಿ ಗಳನ್ನು ಇನ್ನಷ್ಟು ಸುಧಾರಿಸಿ ರೈತಸ್ನೇಹಿ ಮಾರುಕಟ್ಟೆಗಳನ್ನಾಗಿಸಲಿದ್ದೇವೆ.

38. ನನ್ನ ಸರ್ಕಾರವು ಜನ ಕೇಂದ್ರಿತವಾದ ಆರ್ಥಿಕತೆಯನ್ನು ರೂಪಿಸಲು ಬಯಸಿದೆ. ಇದು ಸಾಧ್ಯವಾಗಬೇಕಾದರೆ ಕಡಿಮೆ ಜಾಗದಲ್ಲಿ ಹೆಚ್ಚು ಉದ್ಯೋಗಗಳನ್ನು ಸೃಷ್ಟಿಸುವ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶವನ್ನು ಹೊಂದಿದೆ. ನಾವು ನಮ್ಮ ಉತ್ಪಾದನೆ, ವಿತರಣೆ ಮತ್ತು ಮಾರುಕಟ್ಟೆ ವ್ಯವಸ್ಥೆಯಲ್ಲಿ ಅಕ್ಕಪಕ್ಕದ ರಾಜ್ಯಗಳಲೊಂದಿಗಷ್ಟೇ ಅಲ್ಲದೇ, ದೂರದ ಚೀನಾ ಮುಂತಾದ ದೇಶಗಳೊಂದಿಗೂ ಸ್ಪರ್ಧಿಸಬೇಕಾದ ಅನಿವಾರ್ಯತೆ ಇದೆ ಎಂಬುದನ್ನು ನನ್ನ ಸರ್ಕಾರವು ಮನಗಂಡಿದೆ ಹಾಗೂ ಅದಕ್ಕಾಗಿ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡಲಿದೆ.



39. ನನ್ನ ಸರ್ಕಾರವು ಜನಸ್ನೇಹಿಯೂ, ಪರಿಸರ ಸ್ನೇಹಿಯೂ ಆದ ಪ್ರವಾಸೋದ್ಯಮವನ್ನು ಉತ್ತೇಜಿಸಿ ಕನಿಷ್ಠ 5 ಲಕ್ಷ ಉದ್ಯೋಗಾವಕಾಶಗಳನ್ನು ಸೃಷ್ಟಿಸಲಿದೆ. ನಾಡಿನಲ್ಲಿರುವ ಪ್ರವಾಸಿ ಸ್ಥಳಗಳ ಪರಿಸರ ಸೂಕ್ಷ್ಮತೆ ಹಾಗೂ ಸಂಸ್ಕೃತಿ ಸೂಕ್ಷ್ಮತೆಯನ್ನು ಅರಿತು ಗೌರವಿಸುವಂತೆ ಪ್ರವಾಸಿಗರಿಗೆ ಅರಿವು ಮೂಡಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ನನ್ನ ಸರ್ಕಾರವು ಕೈಗೊಳ್ಳುವುದು.

40. ಕೃತಕ ಬುದ್ಧಿಮತ್ತೆ ಒಂದು ಹೊಸ ತಂತ್ರಜ್ಞಾನವಾಗಿದೆ. ಇದು ಸರಿ ಸಾಟಿಯಿಲ್ಲದ ಅವಕಾಶಗಳನ್ನು ಸೃಷ್ಟಿಸುವ ಜೊತೆಗೆ ಭಯದ ವಾತಾವರಣವನ್ನೂ ಸೃಷ್ಟಿಸುತ್ತದೆ. ಯಾವುದೇ ತಂತ್ರಜ್ಞಾನವನ್ನು ಮಾನವಕುಲದ ಪ್ರಯೋಜನಕ್ಕಾಗಿ ಬಳಸಬಹುದು ಆದರೆ ಅದೇ ಸಮಯದಲ್ಲಿ ಅದನ್ನು ದುರುಪಯೋಗಪಡಿಸಿಕೊಳ್ಳಲೂಬಹುದು. ಆದ್ದರಿಂದ, ಅನೇಕ ದೇಶಗಳು ಕೃತಕ ಬುದ್ಧಿಮತ್ತೆಯನ್ನು ನಿಯಂತ್ರಿಸುವ ಕಾರ್ಯಕ್ಕೆ ಮುಂದಾಗುತ್ತಿವೆ. ಕೃತಕ ಬುದ್ಧಿಮತ್ತೆಯ ಸಕಾರಾತ್ಮಕ ಜನ-ಆಧಾರಿತ ಬಳಕೆಯನ್ನು ಮಾತ್ರ ಖಚಿತಪಡಿಸಿಕೊಳ್ಳಲು ನನ್ನ ಸರ್ಕಾರವು ಸೂಕ್ತ ಕ್ರಮವನ್ನು ತೆಗೆದುಕೊಳ್ಳುತ್ತದೆ.

41. ಸ್ಥಳೀಯ ಸಂಸ್ಥೆಗಳ ಸಬಲೀಕರಣ ಮತ್ತು ಪಂಚಾಯತ್ ರಾಜ್ ವ್ಯವಸ್ಥೆಯನ್ನು ಕಟ್ಟುವಲ್ಲಿ ನಮ್ಮ ರಾಜ್ಯವು

ಮುಂಚೂಣಿಯಲ್ಲಿದೆ. ಸಂವಿಧಾನದ 73 ಮತ್ತು 74ನೇ ಸಾಂವಿಧಾನಿಕ ತಿದ್ದುಪಡಿಗಳ ಆಶಯಗಳನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಲು ನಾವು ಬದ್ಧರಾಗಿದ್ದೇವೆ. ಮಹಾತ್ಮಾ ಗಾಂಧಿ ನರೇಗಾ ಯೋಜನೆ ಮತ್ತು ಮಾಹಿತಿ ಹಕ್ಕು ಕಾಯ್ದೆಯಂತಹ ಜನಸ್ನೇಹಿ ಕಾರ್ಯಕ್ರಮಗಳನ್ನು ಬಲಪಡಿಸಲು ನನ್ನ ಸರ್ಕಾರವು ಬದ್ಧವಾಗಿದೆ. ಮಹಾತ್ಮಾ ಗಾಂಧಿ ನರೇಗಾ ಯೋಜನೆಯು ಗ್ರಾಮೀಣ ಬಡವರ ಆರ್ಥಿಕ ಸಬಲೀಕರಣಕ್ಕಾಗಿ ರೂಪುಗೊಂಡ ಕಾರ್ಯಕ್ರಮಗಳಲ್ಲಿ ವಿಶ್ವದಲ್ಲಿಯೇ ಅತಿದೊಡ್ಡ ಕಾರ್ಯಕ್ರಮವಾಗಿದೆ. ಇದನ್ನು ರಾಜ್ಯದಲ್ಲಿ ಇನ್ನಷ್ಟು ಸಮರ್ಥವಾಗಿ ಅನುಷ್ಠಾನ ಮಾಡುತ್ತೇವೆ.

42. ನನ್ನ ಸರ್ಕಾರವು ಸುಸ್ಥಿರವೂ ಜನಸ್ನೇಹಿಯೂ ಆದ ಗ್ರಾಮಾಡಳಿತ ಮತ್ತು ನಗರಾಡಳಿತ ವ್ಯವಸ್ಥೆಯನ್ನು ರೂಪಿಸಲು ಪ್ರಾಮಾಣಿಕವಾದ ಎಲ್ಲಾ ಪ್ರಯತ್ನಗಳನ್ನು ಮಾಡಲಿದೆ. ರಾಜ್ಯದ ಎಲ್ಲಾ ಗ್ರಾಮ ಮತ್ತು ನಗರಗಳನ್ನು ಜನರ ಸಹಭಾಗಿತ್ವದಲ್ಲಿ ಆರೋಗ್ಯಕರವಾದ ಅಭಿವೃದ್ಧಿಯತ್ತ ಮುನ್ನಡೆಸುವ ಪ್ರಮುಖ ಗುರಿಯನ್ನು ನಾವು ರೂಪಿಸಿಕೊಂಡು ಅನುಷ್ಠಾನ ಮಾಡುತ್ತೇವೆ.

43. ರಾಜ್ಯದ ನಾಗರಿಕರಿಗೆ ಸುರಕ್ಷಿತ, ಶುದ್ಧವಾದ ಕುಡಿಯುವ ನೀರನ್ನು ಒದಗಿಸುವುದು ಸಂವಿಧಾನದ ಅಡಿಯಲ್ಲಿ



ಮೂಲಭೂತ ಹಕ್ಕುಗಳ ವ್ಯಾಪ್ತಿಯಲ್ಲಿ ಬರುತ್ತದೆ. ಹಾಗಾಗಿ ನನ್ನ ಸರ್ಕಾರವು ಗ್ರಾಮೀಣ ಮತ್ತು ನಗರ ಪ್ರದೇಶಗಳ ಮನೆಗಳಿಗೆ ಸುರಕ್ಷಿತವೂ, ಶುದ್ಧವೂ ಆದ ಕುಡಿಯುವ ನೀರನ್ನು ಒದಗಿಸಲು ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡಲಿದೆ.

44. ಜನಸ್ನೇಹಿ ಮತ್ತು ನಿಷ್ಪಕ್ಷಪಾತವಾದ ಪೊಲೀಸರು ರಾಜ್ಯದ ಕಾನೂನು ಸುವ್ಯವಸ್ಥೆಯನ್ನು ಸಮರ್ಥವಾಗಿ ನಿಭಾಯಿಸುವಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಾರೆ. ಆದ್ದರಿಂದ ಸಮರ್ಥ ಪೊಲೀಸ್ ವ್ಯವಸ್ಥೆಯನ್ನು ನಿರ್ಮಿಸಲು ನನ್ನ ಸರ್ಕಾರವು ಬದ್ಧವಾಗಿದೆ. ಜೊತೆಗೆ ಸರ್ಕಾರವು ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆ ಮತ್ತು ಯೋಗಕ್ಷೇಮಕ್ಕೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡುತ್ತದೆ. ಇದಕ್ಕಾಗಿ ಪೊಲೀಸ್ ಇಲಾಖೆಯನ್ನು ಮಹಿಳಾ ಮತ್ತು ಮಕ್ಕಳ ಸ್ನೇಹಿಯಾಗಿ ರೂಪಿಸುವುದು ನನ್ನ ಸರ್ಕಾರದ ಆದ್ಯತೆಯಾಗಿದೆ.

45. ಕರ್ನಾಟಕವು ತನ್ನ ಪ್ರಾದೇಶಿಕ ವೈವಿಧ್ಯಗಳ ಕಾರಣಕ್ಕೆ ಹೆಸರಾಗಿದೆ. ಕಲ್ಯಾಣ, ಕಿತ್ತೂರು, ಕರಾವಳಿ, ಮಲೆನಾಡು, ಮೈಸೂರು ಹಾಗೂ ಬೆಂಗಳೂರು ಇವು ಆರ್ಥಿಕತೆ, ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಅನನ್ಯತೆಯನ್ನು ಉಳಿಸಿ ಬೆಳೆಸುತ್ತಿವೆ. ಕೃಷಿ, ತೋಟಗಾರಿಕೆ, ಪಶುಪಾಲನೆ,

ಮೀನುಗಾರಿಕೆ, ಶಿಕ್ಷಣ, ಪ್ರವಾಸೋದ್ಯಮ, ಕೈಗಾರಿಕೆ, ಆರೋಗ್ಯ ಮುಂತಾದ ಕ್ಷೇತ್ರಗಳಲ್ಲಿ ತಮ್ಮದೇ ಆದ ಸ್ಥಾನಮಾನಗಳನ್ನು ಹೊಂದಿವೆ. ಈ ಎಲ್ಲಾ ಪ್ರದೇಶಗಳನ್ನು ನನ್ನ ಸರ್ಕಾರವು ಕಾಳಜಿಪೂರ್ವಕವಾಗಿ ಅಭಿವೃದ್ಧಿ ಮಾಡುವ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತದೆ.

46. ಕರ್ನಾಟಕದ ಆರ್ಥಿಕತೆಯಷ್ಟೇ ಅಲ್ಲ ದೇಶದ ಅಭಿವೃದ್ಧಿಗೂ ಸಿಂಹಪಾಲನ್ನು ನೀಡುತ್ತಿರುವ ನಮ್ಮ ಬೆಂಗಳೂರನ್ನು ಮತ್ತೊಮ್ಮೆ ನಾವು ವಿಶ್ವದ ಗಮನ ಸೆಳೆಯುವಂತೆ ಮಾಡುತ್ತೇವೆ. ರಸ್ತೆ, ಮಳೆ ನೀರಿನ ಚರಂಡಿಗಳು, ಉದ್ಯಾನ - ಆಟದ ಮೈದಾನಗಳು, ಸಾರ್ವಜನಿಕ ಸಾರಿಗೆ, ಗ್ರಂಥಾಲಯಗಳು, ಅತ್ಯುತ್ತಮ ಕಾಲೇಜುಗಳು, ಪರಿಸರ ಸ್ನೇಹಿಯಾದ ಅಭಿವೃದ್ಧಿ ಚಟುವಟಿಕೆಗಳು, ಉತ್ತಮ ವಸತಿ ವ್ಯವಸ್ಥೆ, ಉತ್ತಮ ಕುಡಿಯುವ ನೀರು, ಸಾರ್ವಜನಿಕ ಆರೋಗ್ಯ, ಸಾರ್ವಜನಿಕ ಶಿಕ್ಷಣ ಸೇರಿದಂತೆ ಅಗತ್ಯವಿರುವ ಎಲ್ಲಾ ನಾಗರಿಕ ವ್ಯವಸ್ಥೆಗಳನ್ನು ನನ್ನ ಸರ್ಕಾರವು ಅಚ್ಚುಕಟ್ಟಾಗಿ ರೂಪಿಸಲಿದೆ. ಸಾಧ್ಯವಾದಷ್ಟು ಮಟ್ಟಿಗೆ ಸಂಚಾರದಟ್ಟಣೆಯ ಸಮಸ್ಯೆಯನ್ನು ಪರಿಹರಿಸುವ ಮೂಲಕ ಆರೋಗ್ಯ ಪೂರ್ಣವಾದ, ಸಹನೀಯವಾದ



ಅಭಿವೃದ್ಧಿ ಹೊಂದಿದ ನಗರವನ್ನಾಗಿ ಬೆಂಗಳೂರನ್ನು ರೂಪಿಸಲು ನನ್ನ ಸರ್ಕಾರವು ಬದ್ಧವಾಗಿದೆ.

47. ಒಟ್ಟಾರೆ ನಾವು ಏನು ಮಾಡಬೇಕು ಎಂಬ ನೀಲಿನಕಾಶೆ ನಮ್ಮ ಮುಂದೆ ಇದೆ. ನನ್ನ ಸರ್ಕಾರಕ್ಕೆ ಇಚ್ಛಾ ಶಕ್ತಿಯಿದೆ. ಅನುಭವ ಮತ್ತು ತಾರುಣ್ಯ ಬೆರೆತ ರೀತಿಯಲ್ಲಿ ನನ್ನ ಸರ್ಕಾರ ರೂಪುಗೊಂಡಿದೆ. ಜನಹಿತವನ್ನು ಎಲ್ಲಕ್ಕಿಂತ ಮುಖ್ಯ ಎಂದು ನನ್ನ ಸರ್ಕಾರ ಭಾವಿಸಿದೆ. ನಾವು ಶಾಂತಿಯುತವಾದ, ಸಮೃದ್ಧವಾದ, ಸೌಹಾರ್ದಯುತವಾದ ಸರ್ವಜನಾಂಗದ ಶಾಂತಿಯ ತೋಟವನ್ನು ನಿರ್ಮಿಸಲು ಬದ್ಧರಾಗಿದ್ದೇವೆ. ಯಾರನ್ನೂ ಹೊರಗೆ ಇಡದೆ ಎಲ್ಲರನ್ನೂ ಒಳಗೊಂಡು `ಇವ ನಮ್ಮವ' ಎಂದು ಕೂಡಿ ಬಾಳುವ ನಮ್ಮ ಹಿರಿಯರ ಕನಸನ್ನು ನನಸು ಮಾಡಲು ನನ್ನ ಸರ್ಕಾರ ಬದ್ಧವಾಗಿದೆ.

48. ನನ್ನ ಸರ್ಕಾರವು ನಾಡಿನ ಸಂತರು, ಸಮಾಜ ಸುಧಾರಕರು, ಸ್ವಾತಂತ್ರ್ಯ ಹೋರಾಟಗಾರರು ಮತ್ತು ಕವಿಗಳು ಮುಂತಾದವರ ದರ್ಶನದಿಂದ ಪ್ರೇರಿತವಾಗಿ ಜನಕೇಂದ್ರಿತವಾದ ಆರ್ಥಿಕತೆಯನ್ನು, ಜನಕೇಂದ್ರಿತವಾದ ಸಾಂಸ್ಕೃತಿಕತೆಯನ್ನು ಮತ್ತು ಸಮಷ್ಠಿಕೇಂದ್ರಿತವಾದ ಅಭಿವೃದ್ಧಿ ಮಾದರಿಗಳನ್ನು ರೂಪಿಸಲು ಉದ್ದೇಶಿಸಿದೆ. ಆ ಮೂಲಕ ದೇಶಕ್ಕೆ ಕರ್ನಾಟಕದ ಮಾದರಿಗಳನ್ನು ನಿರ್ಮಿಸಿ ಸಾಬೀತು ಮಾಡಲು ಅಗತ್ಯವಿರುವ ಯೋಜನೆಗಳನ್ನು

ರೂಪಿಸಿ ಅನುಷ್ಠಾನ ಮಾಡುತ್ತಿದೆ. ಈ ಮಹಾ ಅಭಿಯಾನಕ್ಕೆ ನಿಮ್ಮೆಲ್ಲರ ಸಹಕಾರ, ಸಲಹೆ ಅಗತ್ಯ. ಎಲ್ಲರೂ ಜೊತೆಗೂಡೋಣ, ಸಮೃದ್ಧವೂ, ಸೌಹಾರ್ದಪೂರ್ವಕವೂ ಆದ ನಾಡನ್ನು ನಿರ್ಮಿಸೋಣ.

**ಜೈ ಹಿಂದ್**

**ಜೈ ಕರ್ನಾಟಕ**



14ಅ. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣವನ್ನು ಒದಗಿಸುವ ಶಕ್ತಿ ಯೋಜನೆಯು ಪ್ರತಿದಿನ ಸುಮಾರು 50 ಲಕ್ಷ ಮಹಿಳೆಯರಿಗೆ ಸೇವೆ ಸಲ್ಲಿಸುತ್ತಿದೆ ಎಂದು ಹೇಳಲು ನನ್ನ ಸರ್ಕಾರ ಹೆಮ್ಮೆಪಡುತ್ತದೆ. ಸಮಾಜದ ಆರ್ಥಿಕ ಕ್ಷೇತ್ರದಲ್ಲಿ ಮಹಿಳೆಯರ ಹೆಚ್ಚಿನ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳಲು ಇದು ಒಂದು ಹೆಜ್ಜೆಯಾಗಿದೆ.